All India Radio: Bangalore
National Bulletin In Kannada
27.04.2025  13.10 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಪಹಲ್ಗಾಮ್ ಭಯೋತ್ಪಾದಕರ ದಾಳಿಯಲ್ಲಿ ಮೃತಪಟ್ಟವರ ಕುಟುಂಬಕ್ಕೆ ಶೀಘ್ರವೇ ನ್ಯಾಯ ಸಿಗಲಿದೆ- ಮನದ ಮಾತಿನಲ್ಲಿ ಪ್ರಧಾನಿ ಭರವಸೆ
- ಕರ್ನಾಟಕದ ಬಾಗಲಕೋಟೆ ಬಯಲು ಪ್ರದೇಶದಲ್ಲಿ ಸೇಬು ಕೃಷಿ - ಹರ್ಷ ವ್ಯಕ್ತಪಡಿಸಿದ ಪ್ರಧಾನಿ ನರೇಂದ್ರ ಮೋದಿ
- ಭಾರತೀಯ ಒಳನಾಡು ಜಲಮಾರ್ಗ ಪ್ರಾಧಿಕಾರದಿಂದ ೨೦೨೪-೨೫ನೇ ಆರ್ಥಿಕ ವರ್ಷದಲ್ಲಿ ದಾಖಲೆಯ ೧೪೫.೫ ದಶಲಕ್ಷ ಟನ್ ಸರಕು ಸಾಗಣೆ
- ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಮುಂಬೈ ಇಂಡಿಯನ್ಸ್ - ಲಕ್ನೋ ಸೂಪರ್ ಜೈಂಟ್ಸ್ ಹಾಗೂ ರಾಯಲ್ ಚಾಲೆಂಜರ್ಸ್ ಬೆಂಗಳೂರು - ಡೆಲ್ಲಿ ಕ್ಯಾಪಿಟಲ್ಸ್ ಹಣಾಹಣಿ

***************

ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ದೇಶದ ಏಕತೆ, ೧೪೦ ಕೋಟಿ ಭಾರತೀಯರ ಒಗ್ಗಟ್ಟು ನಿರ್ಣಾಯಕ ಪಾತ್ರ ವಹಿಸಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಮನ್ ಕಿ ಬಾತ್‌ನ ೧೨೧ನೇ ಆವೃತ್ತಿಯಲ್ಲಿಂದು ಭಾವುಕರಾಗಿ ಮಾತು ಆರಂಭಿಸಿದ ಪ್ರಧಾನಿ, ಈ ತಿಂಗಳ ೨೨ ರಂದು ನಡೆದ ಭಯೋತ್ಪಾದಕ ಘಟನೆಯಿಂದ ದೇಶದ ನಾಗರಿಕರು ಶೋಕದಲ್ಲಿದ್ದಾರೆ. ಸಂತ್ರಸ್ತ ಕುಟುಂಬಗಳ ಬಗ್ಗೆ ಪ್ರತಿ ಭಾರತೀಯನಲ್ಲೂ ಅಪಾರ ಸಹಾನುಭೂತಿಯಿದೆ. ರಾಜ್ಯ, ಭಾಷೆಯನ್ನು ಮೀರಿ ಎಲ್ಲ ಜನರು ಈ ದಾಳಿಯಲ್ಲಿ ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡವರ ನೋವನ್ನು ಸ್ವತಃ ಅನುಭವಿಸುತ್ತಿದ್ದಾರೆ ಹಾಗೂ ತಕ್ಕ ಪ್ರತ್ಯುತ್ತರದ ನಿರೀಕ್ಷೆಯಲ್ಲಿದ್ದಾರೆ ಎಂದರು.

ಕಾಶ್ಮೀರದಲ್ಲಿ ಕರಡು ಬರುತ್ತಿರುವ ಕಾಣುತ್ತಿರುವ ಸರ್ವೋತ್ತುಮುಖ ಬೆಳವಣಿಗೆಯನ್ನು ಸಹಿಸಲಾಗಿದೆ ದುಷ್ಟರು ಹೇಡಿತನದ ಕೆಲಸ ಮಾಡಿದ್ದಾರೆ ಎಂದ ಅವರು, ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಸಮಸ್ತ ಭಾರತೀಯರ ಏಕತೆಯೇ ದೊಡ್ಡ ಶಕ್ತಿಯಾಗಲಿದೆ. ಈಗಾಗಲೇ ಅನೇಕ ಜಾಗತಿಕ ನಾಯಕರು ಕರೆ ಮಾಡಿ ತಮ್ಮ ಬೆಂಬಲ ಸೂಚಿಸಿದ್ದು, ಭಯೋತ್ಪಾದನೆ ವಿರುದ್ಧದ ಈ ಹೋರಾಟದಲ್ಲಿ ಭಾರತಕ್ಕೆ ಜಾಗತಿಕಮಟ್ಟದಲ್ಲಿ ಬೆಂಬಲ ದೊರೆಯುತ್ತಿದೆ ಎಂದರು.

ಇದೇ ವೇಳೆ ಅವರು, ಸಂತ್ರಸ್ತ ಕುಟುಂಬಗಳಿಗೆ ಶ್ರೀಘ್ರವೇ ನ್ಯಾಯ ಒದಗಿಸಿ ಕೊಡುವ ಮತ್ತು ಅಪರಾಧಿಗಳು, ಸಂಚುಕೋರರಿಗೆ ಕಠಿಣ ಉತ್ತರ ನೀಡುವ ಭರವಸೆ ನೀಡಿದರು.

ಧ್ವನಿ: ಪ್ರಧಾನಮಂತ್ರಿ

ಇತ್ತೀಚೆಗೆ ಅಗಲಿದ ಖ್ಯಾತ ವಿಜ್ಞಾನಿ ಹಾಗೂ ಇಸ್ರೋ ಮಾಜಿ ಅಧ್ಯಕ್ಷ ಡಾ.ಕೆ.ಕಸ್ತೂರಿರಂಗನ್ ಅವರನ್ನು ಸ್ಮರಿಸಿದ ಪ್ರಧಾನಿ, ವಿಜ್ಞಾನ, ಶಿಕ್ಷಣ ಮತ್ತು ಭಾರತದ ಬಾಹ್ಯಾಕಾಶ ಕಾರ್ಯಕ್ರಮವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುವಲ್ಲಿ ಕಸ್ತೂರಿ ರಂಗನ್ ಕೊಡುಗೆ ಸದಾ ಸ್ಮರಣೀಯ. ಅವರ ನೇತೃತ್ವದಲ್ಲಿ ಇಸ್ರೋಗೆ ಹೊಸ ಸ್ಥಾನಮಾನ ದೊರೆಯಿತು ಎಂದರು.

ಅವರ ಮಾರ್ಗದರ್ಶನದಲ್ಲಿ ಮುಂದುವರೆದ ಬಾಹ್ಯಾಕಾಶ ಕಾರ್ಯಕ್ರಮಗಳು ಭಾರತದ ಪ್ರಯತ್ನಗಳಿಗೆ ಜಾಗತಿಕ ಮನ್ನಣೆ ತಂದುಕೊಟ್ಟವು. ದೇಶದ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಸಿದ್ಧಪಡಿಸುವಲ್ಲಿ ಡಾ.ಕೆ.ಕಸ್ತೂರಿರಂಗನ್ ಅವರು ಬಹು ದೊಡ್ಡ ಪಾತ್ರವಹಿಸಿದ್ದರು ಎಂದು ಹೇಳಿದರು.

ಆರ್ಯಭಟ ಉಪಗ್ರಹ ಉಡಾವಣೆಗೊಂಡು ೫೦ ವರ್ಷ ಪೂರೈಸಿದ ಕುರಿತು ಮಾತನಾಡಿದ ಪ್ರಧಾನಿ, ಈ ಸಾಧನೆ ಪ್ರತಿಭೆ, ಸಮರ್ಪಣೆ, ಕಠಿಣ ಪರಿಶ್ರಮದಿಂದ ಸಾಧ್ಯವಾಯಿತು. ಇಂದು ಭಾರತ ಏಕಕಾಲದಲ್ಲಿ ೧೦೪ ಉಪಗ್ರಹಗಳನ್ನು ಉಡಾವಣೆ ಮಾಡುವ ಮೂಲಕ ದಾಖಲೆ ಸೃಷ್ಟಿಸಿದೆ. ಚಂದ್ರಯಾನ, ಮಂಗಳಯಾನ, ಆದಿತ್ಯ-ಎಲ್೧ ಸೇರಿದಂತೆ ಇತರ ಬಾಹ್ಯಾಕಾಶ ಯೋಜನೆಗಳ ಮೂಲಕ ಭಾರತ ಜಾಗತಿಕ ಬಾಹ್ಯಾಕಾಶ ಶಕ್ತಿಯಾಗಿ ಹೊರಹೊಮ್ಮಿದೆ ಎಂದರು.

ಭಾರತ ತನ್ನ ಬಾಹ್ಯಾಕಾಶ ಕ್ಷೇತ್ರವನ್ನು ಖಾಸಗಿ ವಲಯಕ್ಕೂ ಮುಕ್ತಗೊಳಿಸಿದ್ದು, ಕಳೆದ ಹತ್ತು ವರ್ಷಗಳಲ್ಲಿ ದೇಶದಲ್ಲಿ ಮುನ್ನೂರ ಇಪ್ಪತ್ತೈದಕ್ಕೂ ಹೆಚ್ಚು ಬಾಹ್ಯಾಕಾಶ ನವೋದ್ಯಮಗಳು ಕಾರ್ಯನಿರ್ವಹಿಸುತ್ತಿವೆ. ಭಾರತ ಗಗನಯಾನ, ಸ್ಪೆಡೆಕ್ಸ್ ಮತ್ತು ಚಂದ್ರಯಾನ -೪ ದಂತಹ ಹಲವು ಪ್ರಮುಖ ಯೋಜನೆಗಳ ಸಿದ್ಧತೆಯಲ್ಲಿ ತೊಡಗಿದೆ ಎಂದರು.

ಮ್ಯಾನ್ಮಾರ್ ಭೂಕಂಪದ ಕುರಿತು ಪ್ರಸ್ತಾಪಿಸಿದ ಪ್ರಧಾನಿ, ಆಪರೇಷನ್ ಬ್ರಹ್ಮ ಮೂಲಕ ಭಾರತ ನೀಡಿದ ಸಹಕಾರದ ಕುರಿತು ಮಾಹಿತಿ ಹಂಚಿಕೊಂಡು, ನೆರೆ-ಹೊರೆ ರಾಷ್ಟ್ರಗಳಿಗೆ ಭಾರತದ ಬೆಂಬಲ ನೀಡುವ ಮತ್ತು 'ವಸುಧೈವ ಕುಟುಂಬಕಂ' ಪರಿಕಲ್ಪನೆಗೆ ಬದ್ಧತೆಯನ್ನು ಪುನರುಚ್ಚರಿಸಿದರು.

ಭಾರತದಲ್ಲಿ ವೈದ್ಯಕೀಯ ಸೌಲಭ್ಯಗಳು ಸುಧಾರಿಸುತ್ತಿವೆ ಎಂಬುದಕ್ಕೆ ಪುರಾವೆಯಾಗಿ ಇಥಿಯೋಪಿಯಾದಲ್ಲಿ ಭಾರತೀಯ ವಲಸಿಗರು ಜನ್ಮತಃ ಹೃದ್ರೋಗದಿಂದ ಬಳಲುತ್ತಿರುವ ಮಕ್ಕಳನ್ನು ಚಿಕಿತ್ಸೆಗಾಗಿ ಭಾರತಕ್ಕೆ ಕಳುಹಿಸಲು ಮುಂದಾಗಿರುವ ಕುರಿತು ತಿಳಿಸಿದ ಪ್ರಧಾನಿ, ಅಂತಹ ಅನೇಕ ಮಕ್ಕಳಿಗೆ ಭಾರತೀಯ ಕುಟುಂಬಗಳು ಆರ್ಥಿಕ ನೆರವು ನೀಡುತ್ತಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಇದೇ ವೇಳೆ ಅಫ್ಘಾನಿಸ್ತಾನ್, ನೇಪಾಳ ಸೇರಿದಂತೆ ಅನೇಕ ರಾಷ್ಟ್ರಗಳಿಗೆ ಭಾರತ, ರೇಬಿಸ್, ಟೆಟನಸ್ ಸೇರಿದಂತೆ ಅಪಾಯಕಾರಿ ಕಾಯಿಲೆಗಳನ್ನು ತಡೆಗಟ್ಟುವ ಅಗತ್ಯ ಲಸಿಕೆಗಳ ರವಾನಿಸಿದೆ ಎಂದರು.

ಇನ್ನು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಅಭಿವೃದ್ಧಿಪಡಿಸಿರುವ ಸಚೇತ್ ಆಪ್ ಕುರಿತು ಮಾಹಿತಿ ನೀಡಿದ ಪ್ರಧಾನಿ, ಪ್ರವಾಹ, ಚಂಡಮಾರುತ, ಭೂಕುಸಿತ, ಸುನಾಮಿ, ಕಾಡ್ಗಿಚ್ಚು, ಹಿಮ-ಪಾತ, ಬಿರುಗಾಳಿ ಸಂದರ್ಭದಲ್ಲಿ 'ಸಚೇತ್ ಆಪ್ ಅಗತ್ಯ ಮಾಹಿತಿಯನ್ನು ತಲುಪಿಸುವ ತಂತ್ರಾಂಶವಾಗಿದ್ದು, ಪ್ರಾದೇಶಿಕ ಭಾಷೆಗಳಲ್ಲಿಯೂ ಸಹ ಸಾಕಷ್ಟು ಮಾಹಿತಿ ಒದಗಿಸುತ್ತದೆ ಎಂದು ತಿಳಿಸಿದರು.

ಛತ್ತೀಸ್ ಗಢದಲ್ಲಿನ ದಂತೇವಾಡಾದ ವಿಜ್ಞಾನ ಕೇಂದ್ರದ ಕುರಿತು ಮಾತನಾಡಿದ ಪ್ರಧಾನಿ, ಈ ವಿಜ್ಞಾನ ಕೇಂದ್ರದಲ್ಲಿ ಹೊಸ-ಹೊಸ ಯಂತ್ರಗಳನ್ನು ನಿರ್ಮಿಸುವುದಲ್ಲದೇ ತಂತ್ರಜ್ಞಾನ ಬಳಸಿ ನೂತನ ಉತ್ಪನ್ನಗಳನ್ನು ತಯಾರಿಸಲು ಕೂಡಾ ಕಲಿಸಿಕೊಡಲಾಗುತ್ತಿದೆ. 3D printers ಮತ್ತು robotic ಕಾರುಗಳೊಂದಿಗೆ ಇತರೆ ಆವಿಷ್ಕಾರಕ ವಸ್ತುಗಳ ಬಗ್ಗೆ ಅರಿಯುವ ಅವಕಾಶ ದೊರೆಯುತ್ತಿದೆ ಎಂದರು.

ಇದೇ ವೇಳೆ ಅವರು, ಆಧುನಿಕ ವಿಜ್ಞಾನ ಸಾಮರ್ಥ್ಯದ ನೋಟ ಒದಗಿಸುವ  ಗುಜರಾತ್ ನ ಸೈನ್ಸ್ ಸಿಟಿ ಕುರಿತು ಪ್ರಸ್ತಾಪಿಸಿದರು.

ಇನ್ನು 'ತಾಯಿಯ ಹೆಸರಿನಲ್ಲಿ ಒಂದು ಸಸಿ' ಈ ಅಭಿಯಾನ ಬುರುವ ಜೂನ್ ೫ ರ 'ವಿಶ್ವ ಪರಿಸರ ದಿನದಂದು ಒಂದು ವರ್ಷ ಪೂರೈಸಲಿದೆ ಎಂದ  ಪ್ರಧಾನಿ, ಈ ಒಂದು ವರ್ಷದಲ್ಲಿ ಈ ಅಭಿಯಾನದ ಅಡಿ ದೇಶಾದ್ಯಂತ ತಾಯಿಯ ಹೆಸರಿನಲ್ಲಿ ೧೪೦ ಕೋಟಿಗೂ ಅಧಿಕ ಸಸಿಗಳನ್ನು ನೆಡಲಾಗಿದೆ.

ಕಳೆದ ಕೆಲವು ವರ್ಷಗಳಲ್ಲಿ ಗುಜರಾತ್ ನ ಅಹಮದಾಬಾದ್ ನಗರದಲ್ಲಿ ೭೦ ಲಕ್ಷಕ್ಕೂ ಅಧಿಕ ಮರಗಳನ್ನು ನೆಡಲಾಗಿದೆ ಎಂದ ಪ್ರಧಾನಿ 'ತಾಯಿಯ ಹೆಸರಿನಲ್ಲಿ ಒಂದು ಸಸಿ' ನೆಡುವಂತೆ ಮತ್ತಮ್ಮೆ ಜನತೆಗೆ ಕರೆ ನೀಡಿದರು.

ಸಾಧಾರಣವಾಗಿ ಬೆಟ್ಟಗುಡ್ಡಗಳಲ್ಲಿ ಬೆಳೆಯಲಾಗುವ ಸೇಬನ್ನು ಕರ್ನಾಟಕ ರಾಜ್ಯದಲ್ಲಿ ಬೆಳೆಯಲಾಗುತ್ತಿರುವ ಕುರಿತು ಮನದ ಮಾತಿನಲ್ಲಿ ಮಾಹಿತಿ ನೀಡಿದ ಪ್ರಧಾನಿ, ಕರ್ನಾಟಕದ ಬಾಗಲಕೋಟೆ ನಿವಾಸಿ ಶ್ರೀಶೈಲ್ ತೆಲೀ ಅವರು ೩೫ ಡಿಗ್ರಿಗಿಂತ ಅಧಿಕ ತಾಪಮಾನವಿರುವ ಬಯಲು ಪ್ರದೇಶದಲ್ಲಿ ಸೇಬು ಬೆಳೆದಿರುವ ಕುರಿತು ಅಚ್ಚರಿ ವ್ಯಕ್ತಪಡಿಸಿದರು.

ಇಂದು ಶ್ರೀಶೈಲ್ ಅವರು ನೆಟ್ಟ ಸೇಬು ಮರಗಳಲ್ಲಿ ಹೆಚ್ಚಿನ ಸಂಖ್ಯೆಯ ಸೇಬುಗಳು ಬೆಳೆಯುತ್ತಿವೆ ಮತ್ತು ಅವುಗಳನ್ನು ಮಾರಾಟ ಮಾಡುವ ಮೂಲಕ ಉತ್ತಮ ಆದಾಯವನ್ನು ಗಳಿಸುತ್ತಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ಕೊನೆಯದಾಗಿ ಮೇ ೧೦ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ವಾರ್ಷಿಕೋತ್ಸವದ ಕುರಿತು ಮಾತನಾಡಿದ ಪ್ರಧಾನಿ, ೧೮೫೭ ರ ಕ್ರಾಂತಿಯ ಮಹಾನ್ ನಾಯಕರಾದ ಬಾಬುವೀರ್ ಕುವರ್ ಸಿಂಗ್ ಅವರನ್ನು ಸ್ಮರಿಸಿದರು.

***************

ಭಾರತೀಯ ಒಳನಾಡು ಜಲಮಾರ್ಗ ಪ್ರಾಧಿಕಾರ- ಐಡಬ್ಲ್ಯುಎಐ ೨೦೨೪-೨೫ನೇ ಆರ್ಥಿಕ ವರ್ಷದಲ್ಲಿ, ದಾಖಲೆಯ ೧೪೫.೫ ದಶಲಕ್ಷ ಟನ್ ಸರಕು ಸಾಗಣೆ ನಡೆಸಿರುವುದಾಗಿ ವರದಿಯಾಗಿದೆ.

ಕಲ್ಲಿದ್ದಲು, ಕಬ್ಬಿಣದ ಅದಿರು, ಮರಳು ಮತ್ತು ಹಾರುಬೂದಿ ಮುಂತಾದ ಪ್ರಮುಖ ಸರಕು ಸಾಗಣೆ ವಸ್ತುಗಳು, ಸಾಗಣೆ ಮಾಡಲಾದ ಒಟ್ಟು ಸರಕುಗಳ ಪೈಕಿ ಶೇಕಡ ೬೮ ಕ್ಕೂ ಅಧಿಕ ಪಾಲನ್ನು ಹೊಂದಿರುವುದಾಗಿ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವಾಲಯ ಮಾಹಿತಿ ನೀಡಿದೆ.

***************

ರೈಲ್ವೆ ಟಿಕೆಟ್ ಬುಕ್ಕಿಂಗ್ ವ್ಯವಸ್ಥೆಯ ಸುಧಾರಣೆ ನಿಟ್ಟಿನಲ್ಲಿ ಕೈಗೊಳ್ಳುತ್ತಿರುವ ಕ್ರಮಗಳ ಭಾಗವಾಗಿ, ಭಾರತೀಯ ರೈಲ್ವೆ ಕಾಯ್ದಿರಿಸದ ಟಿಕೆಟ್ ವ್ಯವಸ್ಥೆ ಯುಟಿಎಸ್ ಮೊಬೈಲ್ ಆಪ್ ಅನ್ನು ಪರಿಚಯಿಸಿದೆ.

ಈ ಆಪ್ ಮೂಲಕ ಪ್ರಯಾಣಿಕರು ರೈಲ್ವೆ ನಿಲ್ದಾಣದ ಟಿಕೆಟ್ ಕೌಂಟರ್‌ಗಳಲ್ಲಿ ಸಾಲಿನಲ್ಲಿ ನಿಲ್ಲುವ ಬದಲು ಆನ್‌ಲೈನ್ ಮೂಲಕವೇ ಸರಳವಾಗಿ ಕಾಯ್ದಿರಿಸದ ಟಿಕೆಟ್‌ಗಳನ್ನು ಖರೀದಿಸಬಹುದಾಗಿದೆ. ಈ ಕುರಿತು ನೈಋತ್ಯ ರೈಲ್ವೆ ಬೆಂಗಳೂರು ವಿಭಾಗದ ಸಾರ್ವಜನಿಕ ಸಂಪರ್ಕ ಅಧಿಕಾರಿ ಪ್ರಾಣೇಶ್ ಕೌಳಗಿ ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡಿದ್ದಾರೆ.

ಧ್ವನಿ: ಪ್ರಾಣೇಶ್ ಕೌಳಗಿ, ರೈಲ್ವೆ ಸಾರ್ವಜನಿಕ ಸಂಪರ್ಕ ಅಧಿಕಾರಿ

***************

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಎರಡು ಪಂದ್ಯಗಳು ನಡೆಯಲಿವೆ. ಮುಂಬೈನಲ್ಲಿ ನಡೆಯಲಿರುವ ಮೊದಲ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಲಕ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಅಪರಾಹ್ನ ೩:೩೦ ಕ್ಕೆ ಆರಂಭವಾಗಲಿದೆ.

ದೆಹಲಿಯಲ್ಲಿ ನಡೆಯಲಿರುವ ಎರಡನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ, ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭:೩೦ ಕ್ಕೆ ಪ್ರಾರಂಭವಾಗಲಿದೆ.

********ಮುಕ್ತಾಯ*******